ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಂಸತ್

ಪತ್ರಿಕೆಯ ಹೆಸರು : NAME OF THE NEWS PAPER : ಉದಯವಾಣಿ

ದಿನಾಂಕ : DATE : 17/06/2019

# ಸುಗಮ ಕಲಾಪದ ಅಭಯ

ಉವಾ 17/6/19

## ಇಂದಿನಿಂದ 17ನೇ ಲೋಕಸಭೆಯ ಮೊದಲ ಅಧಿವೇಶನ ಆರಂಭ

**ನವದೆಹಲಿ:** ಹದಿನೇಳನೇ ಲೋಕಸಭೆಯ ಮೊದಲ ಅಧಿವೇಶನಕ್ಕೆ ದೇಶವು ಸಾಕ್ಷಿಯಾಗುವ ಮುನ್ನಾದಿನವೇ ಕೇಂದ್ರ ಸರ್ಕಾರಕ್ಕೆ ಪ್ರತಿಪಕ್ಷಗಳಿಂದ ಸುಗಮ ಕಲಾಪದ ಅಭಯ ಸಿಕ್ಕಿದೆ. ಜನತೆಯ ಹಿತಾಸಕ್ತಿಗೆ ಸಂಬಂಧಿಸಿದ ವಿಧೇಯಕಗಳನ್ನು ಯಾವ ಕಾರಣಕ್ಕೂ ವಿರೋಧಿಸುವುದಿಲ್ಲ ಎಂಬ ಭರವಸೆಯನ್ನು ಪ್ರತಿಪಕ್ಷಗಳ ನಾಯಕರು ನೀಡಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಭಾನುವಾರ ನಡೆದ ಸರ್ವಪಕ್ಷ ಸಭೆಯಲ್ಲಿ ಎಲ್ಲ ಪ್ರತಿಪಕ್ಷಗಳ ನಾಯಕರೂ ಭಾಗವಹಿಸಿದ್ದು ಹಲವು ವಿಚಾರಗಳ ಕುರಿತು ಸಭೆಯಲ್ಲಿ ಚರ್ಚೆ ನಡೆದವು. ಜತೆಗೆ, ನಿರುದ್ಯೋಗ, ರೈತರ ಸಂಕಷ್ಟಗಳು, ಕುಡಿಯುವ ನೀರಿನ ಸಮಸ್ಯೆಗಳ ಬಗ್ಗೆ ಅಧಿವೇಶನದಲ್ಲಿ ಚರ್ಚಿಸಲು ಅವಕಾಶ ನೀಡುವಂತೆ ಪ್ರತಿಪಕ್ಷಗಳ ನಾಯಕರು ಆಗ್ರಹಿಸಿದ್ದಾರೆ.

**ಹೊಸ ಹುರುಪು, ಹೊಸ ಆಲೋಚನೆ:** ನೂತನ ಲೋಕಸಭೆಯ ಅಧಿವೇಶನ ಸೋಮವಾರದಿಂದ ಆರಂಭವಾಗಲಿರುವ ಹಿನ್ನೆಲೆಯಲ್ಲಿ, ಸುಗಮ ಕಲಾಪ ನಡೆಸಲು ಪ್ರತಿಪಕ್ಷಗಳ ಸಹಕಾರ ಕೋರಿ ಈ ಸಭೆ ನಡೆಸಲಾಗಿತ್ತು. ಸಭೆಯಲ್ಲಿ ಮಾತನಾಡಿದ ಪ್ರಧಾನಿ ಮೋದಿ, 'ಸಂಸತ್‌ನ ಕೆಳಮನೆಯ ಮೊದಲ ಅಧಿವೇಶನವು ಹೊಸ ಹುರುಪು ಮತ್ತು ಹೊಸ ಆಲೋಚನೆಗಳಿಂದಲೇ ಆರಂಭವಾಗಲಿ' ಎಂದು ಆಶಿಸಿದರು. ಜತೆಗೆ, ಜನರ ಪ್ರತಿನಿಧಿಗಳಾಗಿರುವ ಸಂಸತ್ ಸದಸ್ಯರು, 16ನೇ ಲೋಕಸಭೆಯ ಕಳೆದ 2 ವರ್ಷಗಳ ಕಲಾಪ ಕೊಚ್ಚಿಹೋದ ಬಗ್ಗೆ ಸ್ಮರಿಸುತ್ತಾ, ಜನತೆಯ ಆಕಾಂಕ್ಷೆಗಳನ್ನು ಈಡೇರಿಸಿದ್ದೇವೋ ಎಂಬ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳಬೇಕು ಎಂದು ಮೋದಿ ಕರೆ ನೀಡಿದರು.

**ಯಾರೆಲ್ಲ ಭಾಗಿ?:** ಪ್ರಧಾನಿ ನರೇಂದ್ರ ಮೋದಿಯವರಲ್ಲದೆ ರಕ್ಷಣಾ ಸಚಿವ ರಾಜನಾಥ್ ಸಿಂಗ್, ರಾಜ್ಯಸಭೆ ಪ್ರತಿಪಕ್ಷ ನಾಯಕ ಗುಲಾಂ ನಬಿ ಆಜಾದ್, ಪಶ್ಚಿಮ ಬಂಗಾಳ ಕಾಂಗ್ರೆಸ್ ನಾಯಕ ಅಧೀರ್ ರಂಜನ್ ಚೌಧರಿ, ಕೇರಳ ಘಟಕದ ಕಾಂಗ್ರೆಸ್ ಕಾರ್ಯಾಧ್ಯಕ್ಷ ಕೆ.ಸುರೇಶ್, ನ್ಯಾಷನಲ್ ಕಾನ್ಫರೆನ್ಸ್ ನಾಯಕ ಫಾರೂಕ್ ಅಬ್ದುಲ್ಲಾ, ಟಿಎಂಸಿ ನಾಯಕ ಡೆರೆಕ್ ಒಬ್ರಿಯಾನ್ ಸೇರಿದಂತೆ ವಿವಿಧ ಪಕ್ಷಗಳ ನಾಯಕರು ಉಪಸ್ಥಿತರಿದ್ದರು.

**ಒಕ್ಕೂಟ ವ್ಯವಸ್ಥೆ ಕುರಿತು ಪ್ರಸ್ತಾಪ:** ದೇಶದಲ್ಲಿ ಒಕ್ಕೂಟ ವ್ಯವಸ್ಥೆಯು ದುರ್ಬಲಗೊಳ್ಳುತ್ತಿರುವ ಬಗ್ಗೆ ಪ್ರತಿಪಕ್ಷಗಳು ತೀವ್ರ ಕಳವಳ ವ್ಯಕ್ತಪಡಿಸಿದ್ದು, ಉದ್ದೇಶಪೂರ್ವಕವಾಗಿ ರಾಜ್ಯಗಳನ್ನು ಗುರಿಯಾಗಿಸುವುದನ್ನು ಸಹಿಸುವುದಿಲ್ಲ ಎಂದು ಹೇಳಿವೆ. ಸಭೆಯ ಬಳಿಕ ಮಾತನಾಡಿದ ರಾಜ್ಯಸಭೆ ಪ್ರತಿಪಕ್ಷ ನಾಯಕ ಗುಲಾಂ ನಬಿ ಆಜಾದ್, 'ನಾವು ಸರ್ಕಾರವನ್ನು ಅಭಿನಂದಿಸಿದ್ದೇವೆ. ಅದರ ಜೊತೆಗೆ, ಇದು ಸಿದ್ಧಾಂತಗಳ ಸಮರ ಎಂಬುದನ್ನು ನೆನಪಿಸಿದ್ದೇವೆ ಹಾಗೂ ಈ ಸಿದ್ಧಾಂತಗಳ ಸಮರ ಇನ್ನೂ ಮುಂದುವರಿಯಲಿದೆ ಎಂದೂ ಸ್ಪಷ್ಟಪಡಿಸಿದ್ದೇವೆ ಎಂದು ಹೇಳಿದ್ದಾರೆ.

**ಕಣಿವೆ ರಾಜ್ಯದ ಚುನಾವಣೆಗೆ ಆಗ್ರಹ.** ಜಮ್ಮು-ಕಾಶ್ಮೀರದಲ್ಲಿ ರಾಷ್ಟ್ರಪತಿ ಆಳ್ವಿಕೆಯ ಅಗತ್ಯವಿಲ್ಲ. ಪಂಚಾಯತ್ ಚುನಾವಣೆಗಳು ಮತ್ತು ಲೋಕಸಭೆ ಚುನಾವಣೆಗಳು ರಾಜ್ಯದಲ್ಲಿ ಶಾಂತಿಯುತವಾಗಿ ನಡೆದಿರುವಾಗ ರಾಜ್ಯ ವಿಧಾನಸಭೆ ಚುನಾವಣೆ ನಡೆಸಲು ಸಮಸ್ಯೆಯೇನು ಎಂದು ಗುಲಾಂ ನಬಿ ಆಜಾದ್ ಪ್ರಶ್ನಿಸಿದ್ದಾರೆ. ಈ ವಿಚಾರದಲ್ಲಿ ಕೇಂದ್ರ ಸರ್ಕಾರ ದ್ವಂದ್ವ ಹೇಳಿಕೆಗಳನ್ನು ನೀಡುತ್ತಿದೆ. ಒಮ್ಮೆ ರಾಜ್ಯದಲ್ಲಿ ಪರಿಸ್ಥಿತಿ ಸರಿಯಿಲ್ಲದ ಕಾರಣ ರಾಷ್ಟ್ರಪತಿ ಆಳ್ವಿಕೆ ಹೇರಲಾಗಿದೆ ಎನ್ನುತ್ತದೆ. ಮತ್ತೊಂದು ಬಾರಿ, ಪಂಚಾಯತ್ ಚುನಾವಣೆಗಳೆಲ್ಲ ಶಾಂತಿಯುತವಾಗಿ ನಡೆದಿವೆ ಎನ್ನುತ್ತಿದೆ. ಹೀಗಿರುವಾಗ ಏಕೆ ಚುನಾವಣೆ ನಡೆಸಲು ವಿಳಂಬ ಮಾಡುತ್ತಿರುವುದೇಕೆ ಎಂದೂ ಆಜಾದ್ ಕೇಳಿದ್ದಾರೆ. ಕಳೆದ ವಾರವಷ್ಟೇ ಕೇಂದ್ರ ಸಂಪುಟವು ಜಮ್ಮು-ಕಾಶ್ಮೀರದಲ್ಲಿ ಜು.3ರಿಂದ ಆರಂಭವಾಗಿ ಮತ್ತೆ 6 ತಿಂಗಳವರೆಗೆ ರಾಷ್ಟ್ರಪತಿ ಆಳ್ವಿಕೆಯ ವಿಸ್ತರಣೆಗೆ ಒಪ್ಪಿಗೆ ನೀಡಿತ್ತು.

**ಇಂದಿನಿಂದ ಅಧಿವೇಶನ:** ಹೊಸದಾಗಿ ರಚನೆಯಾದ 17ನೇ ಲೋಕಸಭೆಯ ಮೊದಲ ಅಧಿವೇಶನವು ಸೋಮವಾರ ಆರಂಭವಾಗಲಿದೆ. ಈ ಅಧಿವೇಶನ ಜೂ.17ರಿಂದ ಜುಲೈ 26ರವರೆಗೆ ನಡೆಯಲಿದೆ.



ಸಭೆಗೆ ಆಗಮಿಸುತ್ತಿರುವ ಪ್ರಧಾನಿ ಮೋದಿ, ಸಚಿವರಾದ ರಾಜನಾಥ್, ಪ್ರಹ್ಲಾದ್ ಜೋಷಿ

### ಒಂದು ದೇಶ, ಒಂದು ಚುನಾವಣೆ: 19ರಂದು ಚರ್ಚೆ

ಪ್ರಧಾನಿ ನರೇಂದ್ರ ಮೋದಿ ಅವರು ಹಿಂದಿನ ಅವಧಿಯಲ್ಲೇ ಪ್ರಸ್ತಾಪಿಸುತ್ತಾ ಬಂದಿರುವ 'ಒಂದು ರಾಷ್ಟ್ರ ಒಂದು ಚುನಾವಣೆ' ಪರಿಕಲ್ಪನೆಯನ್ನು ಸಾಕಾರಗೊಳಿಸುವತ್ತ ಗಮನ ನೆಟ್ಟಿದ್ದಾರೆ. ಅದರಂತೆ, ಇದೇ 19ರಂದು ಎಲ್ಲ ಪಕ್ಷಗಳ ಅಧ್ಯಕ್ಷರ ಸಭೆ ಕರೆಯಲಾಗಿದ್ದು ಸಭೆಯಲ್ಲಿ ಈ ಕುರಿತು ಚರ್ಚೆ ನಡೆಯಲಿದೆ. ಸರ್ವಪಕ್ಷಗಳ ಸಭೆಯ ಬಳಿಕ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಪ್ರಹ್ಲಾದ್ ಜೋಷಿ ಈ ಕುರಿತು ಮಾಹಿತಿ ನೀಡಿದ್ದಾರೆ. 19ರಂದು ನಡೆಯುವ ಪಕ್ಷಗಳ ಅಧ್ಯಕ್ಷರ ಸಭೆಯಲ್ಲಿ, ಒಂದು ದೇಶ-ಒಂದು ಚುನಾವಣೆ ಮಾತ್ರವಲ್ಲದೆ, 2022ರಲ್ಲಿ 75ನೇ ವರ್ಷದ ಸ್ವಾತಂತ್ರ್ಯೋತ್ಸವ ಆಚರಣೆ ಹಾಗೂ ಮಹಾತ್ಮ ಗಾಂಧಿಯ 150ನೇ ಜನ್ಮ ದಿನಾಚರಣೆ ಸೇರಿದಂತೆ ವಿವಿಧ ವಿಚಾರಗಳ ಕುರಿತೂ ಚರ್ಚೆ ನಡೆಯಲಿದೆ ಎಂದಿದ್ದಾರೆ. ಮಾರನೇ ದಿನ ಅಂದರೆ ಜೂ.20ರಂದು ಲೋಕಸಭೆ ಮತ್ತು ರಾಜ್ಯಸಭೆಯ ಎಲ್ಲ ಸಂಸದರಿಗೂ ಔತಣಕೂಟ ಏರ್ಪಡಿಸಲಾಗಿದೆ. ಇಲ್ಲಿ ಎಲ್ಲ ಸಂಸದರೂ ಸರ್ಕಾರದೊಂದಿಗೆ ತಮ್ಮ ಅಭಿಪ್ರಾಯಗಳನ್ನು ಮುಕ್ತವಾಗಿ ಹಂಚಿಕೊಳ್ಳಬಹುದು ಎಂದೂ ಸಚಿವ ಜೋಷಿ ಮಾಹಿತಿ ನೀಡಿದ್ದಾರೆ.

### ಪ್ರತಿಪಕ್ಷಗಳ ಒತ್ತಾಯವೇನು?

- ನಿರುದ್ಯೋಗ, ರೈತರ ಸಂಕಷ್ಟಗಳು, ಬರಗಾಲ, ಕುಡಿಯುವ ನೀರಿನ ಸಮಸ್ಯೆ, ಪತ್ರಿಕಾ ಸ್ವಾತಂತ್ರ್ಯ ಮತ್ತಿತರ ವಿಚಾರಗಳ ಕುರಿತು ಅಧಿವೇಶನದಲ್ಲಿ ಚರ್ಚೆಯಾಗಬೇಕು
- ಮಹಿಳಾ ಮೀಸಲಾತಿ ವಿಧೇಯಕವನ್ನು ಇದೇ ಅಧಿವೇಶನದಲ್ಲಿ ಮಂಡಿಸಿ, ಅಂಗೀಕಾರ ಪಡೆಯಬೇಕು
- ಚುನಾವಣೆಗಳಿಗೆ ಸರ್ಕಾರದಿಂದ ಹಣ ಭರಿಸುವುದು, ಇವಿಎಂ ಬದಲಿಗೆ ಮತಪತ್ರಗಳ ಬಳಕೆ ಮತ್ತಿತರ ಚುನಾವಣಾ ಸುಧಾರಣೆ ಕ್ರಮಗಳನ್ನು ಜಾರಿಗೊಳಿಸಬೇಕು
- ಜಮ್ಮು ಮತ್ತು ಕಾಶ್ಮೀರ ವಿಧಾನಸಭೆ ಚುನಾವಣೆಯನ್ನು ಆದಷ್ಟು ಬೇಗ ನಡೆಸಬೇಕು

2